ಕರ್ನಾಟಕ ಸರಕಾರ

ವಾರ್ತಾ ಇಲಾಖೆ

ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001. ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ: 07-10-2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ<br>ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಹಾಗೂ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಪ್ರದಾನ.<br><br>ಉದ್ಘಾಟನೆ:<br><br>ಶ್ರೀ ಸಿದ್ದರಾಮಯ್ಯ, ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ<br><br>ಅಧ್ಯಕ್ಷತೆ:<br><br>ಶ್ರೀ ಹೆಚ್. ಆಂಜನೇಯ, ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು | 08-10-2014<br>ಬುಧವಾರ<br>ಬೆಳಿಗ್ಗೆ<br>10-30 ಗಂಟೆಗೆ | ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು |
| 2 | ವಿಂಟೇಜ್ ಮೈಸೂರು ಸಿಲ್ಕ್ ಸೀರೆಗಳ ಸ್ಪರ್ಧೆ-2014 ರ ಬಹುಮಾನ ವಿತರಣೆ<br>ಉದ್ಘಾಟನೆ:<br>ಶ್ರೀ ಡಿ.ಎನ್. ನರಸಿಂಹರಾಜು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು | 08-10-2014<br>ಬುಧವಾರ<br>ಬೆಳಿಗ್ಗೆ<br>11-00 ಗಂಟೆಗೆ | ಚಿತ್ರಕಲಾ ಪರಿಷತ್<br>ಕುಮಾರ ಕೃಪಾ ರಸ್ತೆ,<br>ಬೆಂಗಳೂರು |

| | | | |
|---|---|---|---|
| 12 | **ವಿಶ್ವ ದೃಷ್ಟಿ ದಿನಾಚರಣೆ – 2014 :**<br>**"ಬೃಹತ್ ಜನ ಜಾಗೃತಿ ಜಾಥಾ"**<br><br>ಉದ್ಘಾಟನೆ:<br><br>ಶ್ರೀ ಯು. ಟಿ. ಖಾದರ್. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.<br><br>ಅಧ್ಯಕ್ಷತೆ:<br><br>ಡಾ. ಶರಣ ಪ್ರಕಾಶ್ ಪಾಟೀಲ್, ವೈದ್ಯಕೀಯ ಶಿಕ್ಷಣ ಸಚಿವರು.<br><br>ಮುಖ್ಯ ಅತಿಥಿ:<br><br>ಶ್ರೀ ಅನಂತಕುಮಾರ್, ಕೇಂದ್ರ ರಾಸಾಯನಿಕ ಮತ್ತು ರಸ ಗೊಬ್ಬರ ಸಚಿವರು. | 09–10–2014<br>ಗುರುವಾರ<br>ಬೆಳಿಗ್ಗೆ<br>9–00 ಗಂಟೆಗೆ | ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಆವರಣ, 4ನೇ "ಟಿ" ಬ್ಲಾಕ್, ಜಯನಗರ ಬೆಂಗಳೂರು. |

## ಪತ್ರಿಕಾ ಪ್ರಕಟಣೆ

# ವಾರ್ತಾ ಸಚಿವರ ಮುಂಬೈ ಪ್ರವಾಸ

ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)

ಮೂಲ ಸೌಕರ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಅಕ್ಟೋಬರ್ 8 ರಿಂದ 11 ರವರೆಗೆ ಮುಂಬೈ ಪ್ರವಾಸ ಕೈಗೊಳ್ಳಲಿದ್ದಾರೆ.

ಸಚಿವರು ಅಕ್ಟೋಬರ್ 8 ರಂದು ಕೇಂದ್ರ ಹಜ್ ಸಮಿತಿಗೆ ಭೇಟಿ ನೀಡಲಿದ್ದು 9 ರಂದು ಯಶ್‌ರಾಜ್ ಫಿಲಂ ಸ್ಟುಡಿಯೋ, 10 ರಂದು ಮುಂಬೈನ ಫಿಲಂ ಸಿಟಿ ಹಾಗೂ 11 ರಂದು ಮುಂಬೈನ ಡ್ರೈವ್ ಇನ್ ಥಿಯೇಟರ್‌ಗೆ ಭೇಟಿ ನೀಡಲಿದ್ದಾರೆಂದು ಅವರ ಕಚೇರಿ ಪ್ರಕಟಣೆ ತಿಳಿಸಿದೆ.

ಕವನ/ಬಿಜಿಪಿ/ಕೆಎಂ

## ಬೃಹತ್ ಜನ ಜಾಗೃತಿ ಜಾಥಾ

ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವ ವಿದ್ಯಾಲಯ, ಮಿಂಟೋ ಕಣ್ಣಿನ ಆಸ್ಪತ್ರೆ ಹಾಗೂ ವಿವಿಧ ಕ್ಲಬ್ ವತಿಯಿಂದ ವಿಶ್ವ ದೃಷ್ಟಿ ದಿನಾಚರಣೆ ಅಂಗವಾಗಿ ಅಕ್ಟೋಬರ್ 9 ರಂದು ಬೃಹತ್ ಜನಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 9–00 ಗಂಟೆಗೆ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಆವರಣದಿಂದ ಹೊರಡಲಿರುವ ಜನ ಜಾಗೃತಿ ಜಾಥಾವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಶ್ರೀ ಯು.ಟಿ ಖಾದರ್ ಅವರು ಉದ್ಘಾಟಿಲಿದ್ದಾರೆ. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಅವರು ವಹಿಸಲಿದ್ದು, ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವ ಶ್ರೀ ಅನಂತಕುಮಾರ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕವನ:ಬಿಜಿಪಿ:ಜಿಪಿಆರ್.

## ಇಲಾಖಾ ಪರೀಕ್ಷೆಗಳ ಫಲಿತಾಂಶ ಪ್ರಕಟ

ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ನಡೆಸಿದ 2014 ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳ ಫಲಿತಾಂಶವನ್ನು ದಿನಾಂಕ 30–9–2014 ರಂದು ಪ್ರಕಟಿಸಲಾಗಿದ್ದು, ಅಭ್ಯರ್ಥಿಗಳು ಸದರಿ ಫಲಿತಾಂಶವನ್ನು ಆಯೋಗದ ವೆಬ್‌ಸೈಟ್ "http://kpsc.kar.nic.in" ನಲ್ಲಿ ನೋಡಬಹುದಾಗಿರುತ್ತದೆ. ಪರೀಕ್ಷೆಗಳಲ್ಲಿ ಅನುತ್ತೀರ್ಣರಾದ ಅಭ್ಯರ್ಥಿಗಳು ಅಂಕಗಳ ಮರು ಎಣಿಕೆಗಾಗಿ ಫಲಿತಾಂಶ ಪ್ರಕಟವಾದ ದಿನಾಂಕದಿಂದ 30 ದಿನದೊಳಗೆ ನಿಗದಿತ ಶುಲ್ಕದೊಂದಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ. ಅಲ್ಲದೆ, ಆಯೋಗವು ನಡೆಸುವ 2014ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳಿಗೆ ದಿನಾಂಕ 30–09–2014 ಅಧಿಸೂಚನೆಯಲ್ಲಿ ಅರ್ಹ ಸರ್ಕಾರಿ ನೌಕರರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಅರ್ಹ ಅಭ್ಯರ್ಥಿಗಳು ದಿನಾಂಕ 30–9–2014 ರಿಂದ 29–10–2014 ರ ವರೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದ್ದು, ತತ್ಸಂಬಂಧ ಶುಲ್ಕವನ್ನು ಸ್ಕ್ಯಾನರ್ ಸೌಲಭ್ಯವಿರುವ ರಾಜ್ಯದ ಯಾವುದೇ ಗಣಕೀಕೃತ ಅಂಚೆ ಕಚೇರಿ ಶಾಖೆಗಳಲ್ಲಿ ದಿನಾಂಕ 30–9–2014 ರವರೆಗೆ ಪಾವತಿಸಬಹುದಾಗಿರುತ್ತದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಈ ಬಗ್ಗೆ ಹೆಚ್ಚಿನ ವಿವರಗಳಿಗಾಗಿ ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಅಧಿಸೂಚನೆಯನ್ನು ನೋಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳಾದ 080 – 30574944/30574957/30574957 ಅನ್ನು ಸಂಪರ್ಕಿಸಲು ಸೂಚಿಸಿದೆ.

ಕವನ:ಜಿಜಿಪಿ:ಜಿಪಿಆರ್.

# ಮೈಸೂರು ಸಿಲ್ಕ್ ಸೀರೆಗಳ ಪ್ರದರ್ಶನ ಮತ್ತು ಮಾರಾಟ

ಬೆಂಗಳೂರು, ಅಕ್ಟೋಬರ್ 7 (ಕರ್ನಾಟಕ ವಾರ್ತೆ)

ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮ ನಿಯಮಿತ (ಕೆ.ಎಸ್.ಐ.ಸಿ.) ವತಿಯಿಂದ ಮೈಸೂರು ಸಿಲ್ಕ್ ಸೀರೆಗಳ ಪ್ರದರ್ಶನ ಮತ್ತು ಮಾರಾಟವನ್ನು ಅಕ್ಟೋಬರ್ 8 ರಿಂದ 12 ರವರೆಗೆ ಕರ್ನಾಟಕ ಚಿತ್ರಕಲಾ ಪರಿಷತ್‌ನಲ್ಲಿ ಏರ್ಪಡಿಸಲಾಗಿದೆ. ಕೆ.ಎಸ್.ಐ.ಸಿ. ಉತ್ಪನ್ನಗಳ ಮೇಲೆ ಶೇ. 30 ರ ರಿಯಾಯಿತಿ ನೀಡಲಾಗುವುದೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.